# Akashvani : Bangalore
# Regional Bulletin In Kannada
# 02.11.2025 / 2.30 pm
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- ನೌಕಾಪಡೆಯ ಬೃಹತ್ ಸಿಎಂಎಸ್-೩ ಉಪಗ್ರಹ ಉಡಾವಣೆಗೆ ಇಸ್ರೋ ಸಜ್ಜು; ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಲ್ಲಿ ಕ್ಷಣಗಣನೆ
- ಕೊಡಗಿನ ಚೇನಂಡ ಹಾಕಿ ಪಂದ್ಯಾವಳಿಗೆ ಒಂದು ಕೋಟಿ ರೂಪಾಯಿ ಅನುದಾನ; ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ
- ಬೆಂಗಳೂರಿನ ಸುರಂಗ ರಸ್ತೆ ಯೋಜನೆಗೆ ಬಿಜೆಪಿ ವಿರೋಧ - ಲಾಲ್‌ಬಾಗ್ ಬಳಿ ಸಹಿ ಸಂಗ್ರಹ ಅಭಿಯಾನ
- ಬೆಂಗಳೂರಿನಲ್ಲಿ ಇದೇ ೪ರಿಂದ ೬ರವರೆಗೆ ಕೌಶಲ್ಯ ಶೃಂಗಸಭೆ-೨೦೨೫

************

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ - ಇಸ್ರೋ, ಇಂದು ದೇಶದ ಅತ್ಯಂತ ಭಾರವಾದ ಸಂವಹನ ಉಪಗ್ರಹ ಸಿಎಂಎಸ್-೦೩ ಅನ್ನು ಉಡಾವಣೆ ಮಾಡಲು ಸಜ್ಜಾಗಿದೆ. ಸುಮಾರು ೪ ಸಾವಿರದ ೪೦೦ ಕೆ.ಜಿ. ತೂಕದ ಸಿಎಂಎಸ್ -೦೩ ಬಹು-ಬ್ಯಾಂಡ್ ಮಿಲಿಟರಿ ಸಂವಹನ ಉಪಗ್ರಹವಾಗಿದ್ದು, ಇದನ್ನು ಜಿ.ಎಸ್.ಎ.ಟಿ-೭ಆರ್ ಎಂದೂ ಕರೆಯಲಾಗುತ್ತದೆ. ದೇಶದ ಅತ್ಯಂತ ಶಕ್ತಿಶಾಲಿ ರಾಕೆಟ್ ಆಗಿರುವ ಉಡಾವಣಾ ವಾಹನ ಮಾರ್ಕ್-೩ಯಲ್ಲಿ ಉಪಗ್ರಹವನ್ನು ಉಡಾವಣೆ ಮಾಡಲಾಗುವುದು. ಆಂಧ್ರಪ್ರದೇಶದ ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಇಂದು ಸಂಜೆ ೫.೨೬ಕ್ಕೆ ಉಡಾವಣೆ ಆಗಲಿದ್ದು, ಕ್ಷಣಗಣನೆ ಆರಂಭವಾಗಿದೆ. ರಕ್ಷಣಾ ಸಚಿವಾಲಯದ ೧ ಸಾವಿರದ ೫೮೯ ಕೋಟಿ ರೂಪಾಯಿಗಳ ಹೂಡಿಕೆಯಲ್ಲಿ ಅಭಿವೃದ್ಧಿ ಪಡಿಸಲಾಗಿರುವ ಉಪಗ್ರಹವನ್ನು ಭಾರತೀಯ ನೌಕಾಪಡೆಯ ಬಳಕೆಗಾಗಿಯೇ ನಿರ್ಮಿಸಲಾಗಿದೆ.

ಇದು ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ, ೨೦೧೩ರಲ್ಲಿ ಉಡಾವಣೆಗೊಳಿಸಲಾದ ಜಿಸ್ಯಾಟ್-೭ ಉಪಗ್ರಹದ ಬದಲಿಗೆ ಕಾರ್ಯಾಚರಿಸಲಿದೆ.

************

ಕೊಡವರು ಅಂದ್ರೆ ಹಾಕಿ. ಹಾಕಿ ಅಂದ್ರೆ ಕೊಡವರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯ ಪಟ್ಟಿದ್ದಾರೆ. ಗೃಹ ಕಚೇರಿ ಕೃಷ್ಣದಲ್ಲಿ "ಚೇನಂಡ ಹಾಕಿ ಪಂದ್ಯಾವಳಿ"ಯ ಲೋಗೋ ಬಿಡುಗಡೆ ಮಾಡಿ ಮಾತನಾಡಿದ ಅವರು, ಚೇನಂಡ ಹಾಕಿ ಪಂದ್ಯಾವಳಿಗೆ ಸರ್ಕಾರದಿಂದ ಒಂದು ಕೋಟಿ ಅನುದಾನ ಒದಗಿಸಲಾಗುವುದು ಎಂದು ಅವರು ಭರವಸೆ ನೀಡಿದ್ದಾರೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಕೊಡಗಿನ ಹಾಕಿ ಪಟುಗಳು ಮಿಂಚಿದ್ದು, ದೇಶಕ್ಕೆ ಕೀರ್ತಿ ತಂದಿದ್ದಾರೆ ಎಂದು ಶ್ಲಾಘಿಸಿದರು. ೨೦೨೮ರ ಮೇ ತಿಂಗಳಲ್ಲಿ ನಡೆಯುವ ಪಂದ್ಯಾವಳಿಗೆ ಸರ್ಕಾರದಿಂದ ಒಂದು ಕೋಟಿ ರೂಪಾಯಿ ಅನುದಾನ ನೀಡುವುದರ ಜೊತೆಗೆ ಪಂದ್ಯಾವಳಿ ನೋಡಲು ತಾವು ಆಗಮಿಸುವುದಾಗಿ ಭರವಸೆ ನೀಡಿದ್ದಾರೆ. ಈ ನಡುವೆ ಕೊಡವ ಸಮುದಾಯದ ಭಾಷಿಕ ಒಕ್ಕೂಟದ ಪದಾಧಿಕಾರಿಗಳ ನಿಯೋಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಗೃಹ ಕಚೇರಿ ಕೃಷ್ಣದಲ್ಲಿ ಭೇಟಿಯಾಗಿ ತಮ್ಮ ಬೇಡಿಕೆಗಳ ಬಗ್ಗೆ ಚರ್ಚಿಸಿ ಮನವಿ ಸಲ್ಲಿಸಿದೆ.

************

ರಾಜ್ಯ ಸರ್ಕಾರ ಬೆಂಗಳೂರಿನಲ್ಲಿ ನಿರ್ಮಿಸಲು ಹೊರಟಿರುವ ಅಪಾಯಕಾರಿ ಸುರಂಗ ರಸ್ತೆ ಯೋಜನೆಯನ್ನು ನಿಲ್ಲಿಸುವಂತೆ ಒತ್ತಾಯಿಸಿ ಬಿಜೆಪಿ ಇಂದು ಪ್ರತಿಭಟನೆ ನಡೆಸಿತು. ಪ್ರತಿಪಕ್ಷ ನಾಯಕ ಆರ್.ಅಶೋಕ, ಸಂಸದ ತೇಜಸ್ವಿಸೂರ್ಯ ನೇತೃತ್ವದಲ್ಲಿ ಲಾಲ್‌ಬಾಗ್ ಪೂರ್ವದ್ವಾರದ ಬಳಿ ಹಮ್ಮಿಕೊಳ್ಳಲಾಗಿದ್ದ ಪ್ರತಿಭಟನೆಯಲ್ಲಿ ಹಲವು ಮಂದಿ ಭಾಗವಹಿಸಿದ್ದರು. ಇದೇ ವೇಳೆ ಸಹಿ ಸಂಗ್ರಹ ಅಭಿಯಾನ ನಡೆಸಲಾಯಿತು. ಪ್ರತಿಪಕ್ಷ ನಾಯಕ ಆರ್ ಆಶೋಕ ಮಾತನಾಡಿ, ಬೆಂಗಳೂರಿನ ಪರಿಸರ ಹಾಳು ಮಾಡಬೇಡಿ ಎಂದು ಸರ್ಕಾರಕ್ಕೆ ಮನವಿ ಮಾಡಿದ್ದಾರೆ. ಇದು ಜನಪರ ಯೋಜನೆ ಅಲ್ಲ ಎಂದು ದೂರಿದ್ದಾರೆ.

************

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ರಾಜ್ಯವ್ಯಾಪಿ ನಿರಂತರ ಮಳೆ, ಪ್ರವಾಹ ಹಾಗೂ ಭೂ ಕುಸಿತಗಳು ಸಂಭವಿಸಿದ್ದು, ಹಾವೇರಿ ಜಿಲ್ಲೆಯಲ್ಲಿಯೂ ಹೆಚ್ಚಿನ ಹಾನಿ ಉಂಟಾಗಿದೆ. ಜಿಲ್ಲೆಯಲ್ಲಿ ಪರಿಹಾರ ಹಾಗೂ ಮೂಲ ಸೌಕರ್ಯಗಳ ಮರು ನಿರ್ಮಾಣಕ್ಕೆ ೧ ಸಾವಿರದ ೫೪೫.೨೪ ಕೋಟಿ ರೂಪಾಯಿ  ಅಗತ್ಯವಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ. ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ ವಾಸವಿರುವ ಜನರಿಗೆ ಜಾಗದ ಮಾಲೀಕತ್ವ ನೀಡಲು ಹಕ್ಕುಪತ್ರ ಅಭಿಯಾನ ಆರಂಭಿಸಲಾಗಿದೆ. ಈಗಾಗಲೇ ೪೧೮ ದಾಖಲೆ ರಹಿತ ಜನವಸತಿ ಪ್ರದೇಶಗಳಲ್ಲಿ ಗುರುತಿಸಿ, ೨ ಸಾವಿರದ ೮೦ ಮಂದಿಗೆ ಹಕ್ಕುಪತ್ರ ವಿತರಿಸಲಾಗಿದೆ. ಇನ್ನೂ ೩೦ ಸಾವಿರ ಮಂದಿಗೆ ಹಕ್ಕುಪತ್ರ ವಿತರಣೆ ಬಾಕಿಯಿದೆ ಎಂದು ಹೇಳಿದ್ದಾರೆ. ರೈತರು ಎದುರಿಸಿರುವ ಹಾನಿಗೂ ಪರಿಹಾರ ನೀಡುವ ಪ್ರಕ್ರಿಯೆ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

************

ಕೌಶಲ್ಯಾಭಿವೃದ್ಧಿಗೆ ವಿಶೇಷ ಆದ್ಯತೆ ನೀಡುತ್ತಿರುವ ರಾಜ್ಯ ಸರ್ಕಾರ ಇದೇ ೪ ರಿಂದ ೬ ರವರೆಗೆ ಕೌಶಲ್ಯ ಶೃಂಗಸಂಭೆ ೨೦೨೫ ಆಯೋಜಿಸಿದೆ. ಕೌಶಲ್ಯದ ನಾವೀನ್ಯತೆ ಮತ್ತು ವಿಶೇಷ ಸೌಲಭ್ಯಗಳ ತಾಣವಾಗಿ ರಾಜ್ಯ ಹೊರ ಹೊಮ್ಮುತ್ತಿದ್ದು, ಇದೇ ಮೊದಲ ಬಾರಿಗೆ ಈ ಮಹತ್ವಾಕಾಂಕ್ಷೆಯ ಸಮಾವೇಶ ಆಯೋಜಿಸಲಾಗುತ್ತಿದೆ.  ಮುಖ್ಯಮಂತ್ರಿ ಸಿದ್ದರಾಮಯ್ಯ ಸಮ್ಮೇಳನಕ್ಕೆ ಚಾಲನೆ ನೀಡಲಿದ್ದಾರೆ. ಕೈಗಾರಿಕೆ ಶೈಕ್ಷಣಿಕ ತರಬೇತಿ ಮತ್ತು ಮಾನದಂಡಗಳಿಗೆ ಅನುಗುಣವಾಗಿ ಯುವಸಮೂಹವನ್ನು ಬೆಳೆಸಲು ಹಾಗೂ ಉದ್ಯೋಗವನ್ನು ಹೆಚ್ಚಿಸುವ ಗುರಿಯನ್ನು ಈ ಶೃಂಗಸಭೆ ಹೊಂದಿದೆ. ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ಕೌಶಲ್ಯ ಅಭಿವೃದ್ಧಿ ಪ್ರಾಧಿಕಾರ ಮತ್ತು ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ ಜಂಟಿ ಸಹಯೋಗದಲ್ಲಿ ಈ ಶೃಂಗಸಭೆ ಆಯೋಜಿಸಲಾಗುತ್ತಿದೆ.

************

ಬೆಂಗಳೂರು ನಗರದ ಸ್ವಚ್ಛತೆ ಮತ್ತು ಸೌಂದರ್ಯವನ್ನು ಹೆಚ್ಚಿಸುವ ಉದ್ದೇಶದಿಂದ, ಉತ್ತರ ನಗರ ಪಾಲಿಕೆಯ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಸರ್ವಜ್ಞನಗರ ವಿಭಾಗ ವ್ಯಾಪ್ತಿಯ

ಮಸ್ಟರಿಂಗ್ ಪಾಯಿಂಟ್ ಗೆ ಭೇಟಿ ನೀಡಿ ಆಟೋ ಟಿಪ್ಪರ್ ಹಾಜರಾತಿ ಹಾಗೂ ಕಾರ್ಯನಿರ್ವಹಣೆ ಕುರಿತು ಪರಿಶೀಲನೆ ನಡೆಸಿದರು. ಪರಿಶೀಲನೆ ಸಮಯದಲ್ಲಿ ಚಾಲಕ ಮತ್ತು ಲೋಡರ್ ಕೈಗವಸವನ್ನು ಕಡ್ಡಾಯವಾಗಿ ಧರಿಸಲು ಹಾಗೂ ಪರಿಶೀಲನೆ ವೇಳೆ ಕಂಡುಬಂದ ಎಲ್ಲಾ ಬ್ಲಾಕ್ ಸ್ಪಾಟ್ ಗಳನ್ನು ತಕ್ಷಣ ತೆರವುಗೊಳಿಸಿ, ರಸ್ತೆ ಸ್ವಚ್ಛಗೊಳಿಸಲು ಸೂಚನೆ ನೀಡಿದರು. ಒಣ ಕಸ ಮತ್ತು ಹಸಿ ಕಸವನ್ನು ಕಡ್ಡಾಯವಾಗಿ ಬೇರ್ಪಡಿಸಿ ವಿಲೇವಾರಿ ಮಾಡಲು ಆಟೋ ಟಿಪ್ಪರ್ ಚಾಲಕರಿಗೆ ಸೂಚನೆ ನೀಡಿದರು. ನಗರದ ಸ್ವಚ್ಛತೆ ಕಾಪಾಡಲು ಪ್ರತಿದಿನವೂ ನಗರ ಪಾಲಿಕೆಯ ಸಿಬ್ಬಂದಿ ತಂಡ ಶ್ರಮಿಸುತ್ತಿದ್ದು, ಸಾರ್ವಜನಿಕರು ಸಹ ಈ ಪ್ರಯತ್ನಕ್ಕೆ ಕೈಜೋಡಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

************

ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ೨೦೨೫-೨೬ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆಯನ್ನು ಜಿ.ಪಿ.ಎಸ್ ಆಧಾರಿತ ಮೊಬೈಲ್ ಆಪ್ ಬಳಸಿ ನಡೆಸಲಾಗುತ್ತಿದೆ. ಬೆಳೆ ಸಮೀಕ್ಷೆ ಮೂಲಕ ಸಂಗ್ರಹಿಸಿದ ಬೆಳೆ ಮಾಹಿತಿಯನ್ನು ಮೇಲ್ವಿಚಾರಕರ ಮೂಲಕ ಅನುಮೋದನೆ ಪಡೆದ ಬಳಿಕ ಈ ಮಾಹಿತಿಯನ್ನು ಬೆಂಬಲ ಬೆಲೆಯಲ್ಲಿ ಕೃಷಿ ಉತ್ಪನ್ನಗಳ ಖರೀದಿಗಾಗಿ, ಬೆಳೆ ವಿಮೆ ಯೋಜನೆಗಾಗಿ, ಬೆಳೆ ನಷ್ಟ ಪರಿಹಾರ ನೀಡುವ ಸಮಯದಲ್ಲಿ ಹಾಗೂ ಇತರೆ ಸೌಲಭ್ಯ ಪಡೆಯಲು ಬಳಸಲಾಗುತ್ತದೆ. ತಾಲೂಕಿನ ಪ್ರತಿ ಗ್ರಾಮಗಳಿಗೆ ಖಾಸಗಿ ನಿವಾಸಿಗಳನ್ನು ರೈತರ ಜಮೀನುಗಳಲ್ಲಿ ಸೆಪ್ಟಂಬರ್ ೧ರಿಂದ ಮೊಬೈಲ್ ಆಪ್ ಮೂಲಕ ಬೆಳೆಗಳ ಛಾಯಚಿತ್ರಗಳನ್ನು ಸೆರೆಹಿಡಿದು ಬೆಳೆ ಸಮೀಕ್ಷೆ ಕೈಗೊಳ್ಳಲಾಗಿದೆ. ಬೆಳೆಯ ಮಾಹಿತಿ ತಪ್ಪಾಗಿದ್ದಲ್ಲಿ ಕೂಡಲೇ ಬೆಳೆ ದರ್ಶಕ್ ೨೦೨೫-೨೬ ಆಪ್‌ನಲ್ಲಿ ಸರ್ವೇ ನಂಬರ್‌ವಾರು ಆಕ್ಷೇಪಣೆ ಸಲ್ಲಿಸಬಹುದು ಎಂದು ಬೆಂಗಳೂರು ದಕ್ಷಿಣ ಜಿಲ್ಲೆಯ ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕರಾದ ಅಂಬಿಕಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

************

ರಾಜ್ಯದ ವಿವಿಧೆಡೆ ಕೆಸೆಟ್ ಪರೀಕ್ಷೆ ಶಾಂತಿಯುತವಾಗಿ ನಡೆಯುತ್ತಿದೆ. ೩೩ ವಿಷಯಗಳಿಗೆ ನಡೆಯುವ ಪರೀಕ್ಷೆಗೆ ಒಂದು ಲಕ್ಷದ ೩೬ ಸಾವಿರ ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ.

ಬೆಂಗಳೂರು, ಬಳ್ಳಾರಿ, ಬೆಳಗಾವಿ, ಮಂಗಳೂರು ಸೇರಿದಂತೆ ೩೧೬ ಕೇಂದ್ರಗಳಲ್ಲಿ ಪರೀಕ್ಷೆ ನಡೆಯುತ್ತಿದೆ. ದಾವಣಗೆರೆಯ ೨೧ ಕೇಂದ್ರಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ ನಡೆಯಿತು. ಪರೀಕ್ಷೆಗಾಗಿ ಒಟ್ಟು ೯ ಸಾವಿರದ ೭೧೦ ಅಭ್ಯರ್ಥಿಗಳು ಹೆಸರು ನೊಂದಾಯಿಸಿದ್ದಾರೆ. ಎಲ್ಲಾ ಪರೀಕ್ಷಾ ಕೇಂದ್ರಗಳ ೨೦೦ ಮೀಟರ್ ಸುತ್ತಳತೆಯಲ್ಲಿ ಜಿಲ್ಲಾಡಳಿತ ನಿಷೇಧಾಜ್ಞೆ ಜಾರಿಗೊಳಿಸಿದೆ.

************

ಭಾರತದ ಉಕ್ಕಿನ ಮನುಷ್ಯ ಸರದಾರ್ ವಲ್ಲಭಭಾಯ್ ಪಟೇಲ್ ಅವರ ೧೫೦ ನೇ ಹುಟ್ಟು ಹಬ್ಬದ ಅಂಗವಾಗಿ ಇದೇ ೫ ಮತ್ತು ೬ ರಂದು ಜಿಲ್ಲಾ ಮಟ್ಟದ ಏಕತಾ ನಡಿಗೆ ಹಮ್ಮಿಕೊಳ್ಳಲಾಗಿದೆ ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಇದೇ ೫ರಂದು ಹೊನ್ನಾವರದಲ್ಲಿ ಹಾಗೂ ೬ ರಂದು ಹಳಿಯಾಳದಲ್ಲಿ ಏಕತಾ ನಡಿಗೆ ಹಮ್ಮಿಕೊಳ್ಳಲಾಗಿದೆ. ಈ ಏಕತಾ ನಡಿಗೆ ಎಲ್ಲಾ ಸಂಘ ಸಂಸ್ಥೆಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ಧ್ವನಿ : ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ( ೪೦ ಸೆಕೆಂಡುಗಳು)

************

ಕಾರ್ತಿಕ ಮಾಸದ ಶುಕ್ಲಪಕ್ಷದ ದ್ವಾದಶಿಯ ಇಂದಿನ ದಿನ ತುಳಸಿ ಪೂಜಾ ಹಬ್ಬವನ್ನು ಮಹಿಳೆಯರು ಶ್ರದ್ಧಾಭಕ್ತಿಗಳಿಂದ ಆಚರಿಸುತ್ತಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಬೃಂದಾವನವನ್ನು ತಳಿರು ತೋರಣಗಳಿಂದ ವಿಶೇಷವಾಗಿ ಸಿಂಗರಿಸಿ, ಪೂಜೆ ಸಲ್ಲಿಸುತ್ತಿದ್ದ ದೃಶ್ಯ ಸಾಮಾನ್ಯವಾಗಿದೆ. ತುಳಸಿ ಗಿಡದೊಂದಿಗೆ ಬೆಟ್ಟದ ನಲ್ಲಿಕಾಯ ರೆಂಬೆಯನ್ನು ಇಟ್ಟು , ಕೃಷ್ಣನ ಮೂರ್ತಿ ಅಥವಾ ಫೋಟೋ ಪೂಜಿಸಿ ಮುತ್ತೈದೆಯರಿಗೆ ಅರಿಶಿಣ ಕುಂಕುಮ ನೀಡುವುದು ಈ ಆಚರಣೆಯ ವೈಶಿಷ್ಟ್ಯವಾಗಿದೆ.

************